ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) 30 ಹಾಸಿಗೆಗಳುಳ್ಳ ಆಸ್ಪತ್ರೆಗಳಲ್ಲಿ ಮಾತ್ರ ಹಾಲು, ಬ್ರೆಡ್ ವಿತರಿಸಬಹುದು.

ಆ) ವಿತರಿಸುತ್ತಿಲ್ಲಾ.

ಇ) ಅನ್ವಯಿಸುವುದಿಲ್ಲ

ಈ) ವಿಷಯವನ್ನು ಜಿಲ್ಲಾ ಪಂಚಾಯತ್ ಪರಿಗಣಿಸಬೇಕಾಗುತ್ತದೆ.

೫ನೇ ತರಗತಿಯನ್ನು ಪ್ರಾಥಮಿಕ ಶಾಲೆಗೂ ೮ನೇ ತರಗತಿಯನ್ನು ಮಾಧ್ಯಮಿಕ ಶಾಲೆಗೂ ಸೇರಿಸುವುದು

2621(3013) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ೫ನೇ ತರಗತಿಯನ್ನು ಪ್ರಾಥಮಿಕ ಶಾಲೆಗೂ ೮ನೇ ತರಗತಿಯನ್ನು ಮಾಧ್ಯಮಿಕ ಶಾಲೆಗೂ ಸೇರಿಸಲು ಯೋಚಿಸಿದೆಯೇ?

ಆ) ಇದರಿಂದ ಉಂಟಾಗುವ ಪ್ರಯೋಜನಗಳೇನು?

ಶ್ರೀ ಹೆಚ್. ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ೨೦೦೧-೨೦೦೨ನೇ ಶೈಕ್ಷಣಿಕ ವರ್ಷದಲ್ಲಿ ೫ನೇ ತರಗತಿಯನ್ನು ಕಿರಿಯ ಪ್ರಾಥಮಿಕ ಶಾಲೆಗೆ ಸೇರಿಸಲಾಗಿದೆ. ೧ ರಿಂದ ೭ನೇ ತರಗತಿ ಹಾಗೆಯೇ ಮುಂದುವರಿದಿದೆ. ೮ನೇ ತರಗತಿಯನ್ನು ಹಿರಿಯ ಪ್ರಾಥಮಿಕ ಶಾಲೆಯೊಂದಿಗೆ ಸೇರಿಸುವ ವಿಷಯವು ಪರಿಶೀಲನೆಯಲ್ಲಿದೆ.

ಆ) ಪ್ರತ್ಯೇಕವಾಗಿ ನಡೆಯುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ೧ ರಿಂದ ೪ನೇ ತರಗತಿಯವರಿಗೆ ಮಾತ್ರ ವ್ಯಾಸಂಗಕ್ಕೆ ಅವಕಾಶವಿದ್ದು, ೫ನೇ ತರಗತಿ ಶಿಕ್ಷಣವನ್ನು ಮುಂದುವರಿಸಲು ಗ್ರಾಮಾಂತರ ಪ್ರದೇಶದಲ್ಲಿ ವಿದ್ಯಾರ್ಥಿಗಳು ದೂರದ ಪ್ರದೇಶಗಳಿಗೆ ನಡೆದು ಹೋಗಬೇಕಾಗಿದೆ. ಈ ಕಾರಣದಿಂದಾಗಿ ಬಹುತೇಕ ಮಕ್ಕಳು ಅದರಲ್ಲೂ ಹೆಣ್ಣು ಮಕ್ಕಳು ಪ್ರಾಕೃತಿಕ ಅಡೆತಡೆಗಳಿಂದಾಗಿ ವ್ಯಾಸಂಗವನ್ನು ನಿಲ್ಲಿಸುತ್ತಿರುವುದನ್ನು ಗಮನದಲ್ಲಿಟ್ಟುಕೊಂಡು ಈ ಬದಲಾವಣೆಯನ್ನು ಮಾಡಲಾಗಿದೆ. ಈ ಬದಲಾವಣೆಯು ಕೇಂದ್ರ ಮಾದರಿ ಪಠ್ಯ ಕ್ರಮದ ಮಾದರಿಯ ಅನುಸಾರ ಇದೆ.

ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸ ಮಾಡುತ್ತಿರುವುದು

2622(3014) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.